# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ,ಧಾರವಾಡ, ಕಾರವಾರ, ವಿಜಯಪುರ,ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:18/ಸಂಚಿಕೆ : 150 RNI NO.KAR KAN/2003/10452:No.G2/PMG/KA/NK/743/18-20 ಮಂಗಳವಾರ ದಿನಾಂಕ : 19-05-2020 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

## ಸೋಂಕು ತಡೆಗೆ ಲಾಕ್‌ಡೌನ್ ಅನಿವಾರ್ಯ : ಸುರೇಶ ಅಂಗಡಿ

ಸವದತ್ತಿ : ಕೊರೋನಾ ಸೋಂಕು ಸ್ಥಿತಿ ಗತಿ



ಅವಲೋಕಿಸಿ ತೀರ್ವಾನ ಕೈಗೊಳ್ಳಲು ಸವದತ್ತಿಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಯಿತು.ರಾಜ್ಯದಲ್ಲಿ ಕೊರೋನಾ ಅಟ್ಟಹಾಸ ಹೆಚ್ಚುತ್ತಲೇ ಇದೆ. ಲಾಕ್‌ಡೌನ್ ಸಡಿಲಿಕೆಯಿಂದ ಕೊರೋನಾ ಸೋಂಕು ಇನ್ನಷ್ಟು ಹೆಚ್ಚಬಹುದು ಎಂಬ ಭಯ ಕಾಡುತ್ತಿದೆ. ರೈಲ್ವೆ ಖಾತೆ ರಾಜ್ಯ ಸಚಿವ ಸುರೇಶ ಅಂಗಡಿ ಮಾತನಾಡಿ, ಕೇಂದ್ರ ಸರ್ಕಾರ ಲಾಕ್‌ಡೌನ್‌ನ್ನು ಮೇ 31ರವರೆಗೆ ವಿಸ್ತರಿಸಿ ಆದೇಶ ಹೊರಡಿಸಿದೆ.

(2ನೇ ಪುಟಕ್ಕೆ)

### ಪ್ರತಿ ಭಾನುವಾರ ಕಂಪ್ಲೀಟ್ ಲಾಕ್‌ಡೌನ್

# ರಾಜ್ಯಾದ್ಯಂತ ಸರ್ಕಾರಿ, ಖಾಸಗಿ ಬಸ್ ಸಂಚಾರಕ್ಕೆ ಅವಕಾಶ

ಬೆಂಗಳೂರು: ರಾಜ್ಯದಲ್ಲಿ ಇಂದಿನಿಂದ ನಾಲ್ಕನೇ ಹಂತದ ಲಾಕ್‌ಡೌನ್ ಜಾರಿಯಲ್ಲಿದ್ದು, ಕಂಟೈನ್‌ಮೆಂಟ್ ಝೋನ್‌ನಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಕಾನೂನು ಮೀರಿದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಜನರ ಓಡಾಟಕ್ಕಾಗಿ ನಾಳೆಯಿಂದ ಬಿಎಂಟಿಸಿ, ಕೆಎಸ್‌ಆರ್‌ಟಿಸಿ ಸೇರಿದಂತೆ ಎಲ್ಲ ಬಸ್‌ಗಳ ಓಡಾಟಕ್ಕೆ ಅನುಮತಿ ನೀಡಲಾ ಗಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಾಕ್‌ಡೌನ್ 4.0ಗೆ ಸಂಬಂಧಿಸಿದಂತೆ ಮಾರ್ಗಸೂಚಿಯನ್ನು ಕೇಂದ್ರ ಸರ್ಕಾರ ಜಾರಿ ಮಾಡಿದೆ. ಅದಕ್ಕೆ ಸಂಬಂಧಿಸಿದಂತೆ ಇಂದು ಸಚಿವ ಸಂಪುಟದ ಸದಸ್ಯರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ ಎಂದು ಅವರು ತಿಳಿಸಿದರು.

(2ನೇ ಪುಟಕ್ಕೆ)



## ಮಹಾರಾಷ್ಟ್ರದ ಜತೆ ನೀರು ವಿನಿಮಯ ಕುರಿತು ಶೀಘ್ರ ಸಭೆ: ಸಚಿವ ರಮೇಶ್ ಜಾರಕಿಹೊಳಿ

ಬೆಳಗಾವಿ, ಮೇ.18: ಪ್ರತಿವರ್ಷ ಬೇಸಿಗೆಯಲ್ಲಿ ಉಂಟಾಗುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಮಹಾರಾಷ್ಟ್ರದ ಜತೆ ಕೃಷ್ಣಾ ನದಿ ನೀರು ವಿನಿಮಯ ಮಾಡಿಕೊಳ್ಳುವ ಕುರಿತು ಶೀಘ್ರದಲ್ಲೇ ಬೆಂಗಳೂರಿನಲ್ಲಿ ಉಭಯ ರಾಜ್ಯಗಳ ಪ್ರತಿನಿಧಿಗಳ ಉನ್ನತ ಮಟ್ಟದ ಸಭೆ ನಡೆಸಲಾಗುವುದು ಎಂದು ಜಲಸಂಪನ್ಮೂಲ ಇಲಾಖೆಯ ಸಚಿವರಾದ ರಮೇಶ್ ಜಾರಕಿಹೊಳಿ ತಿಳಿಸಿದರು.

ಕರ್ನಾಟಕ ನೀರಾವರಿ ನಿಗಮದ ಉತ್ತರ ವಲಯದ ಮುಖ್ಯ ಎಂಜಿನಿಯರ್ ಅವರ ಕಚೇರಿಯಲ್ಲಿ ಸೋಮವಾರ (ಮೇ 18) ನಡೆದ ಗಟ್ಟಿ ಬಸವಣ್ಣ ಯೋಜನೆ ಕುರಿತ ಸಭೆಗಿಂತ ಮುಂಚೆ ಅವರು ಸುದ್ದಿಗಾರರ ಜತೆ ಮಾತನಾಡಿದರು. ಮಹಾರಾಷ್ಟ್ರ ಜತೆ ನೀರು ವಿನಿಮಯ ಕುರಿತು ಶೀಘ್ರದಲ್ಲಿಯೇ ಆ ರಾಜ್ಯದ ನೀರಾವರಿ ಸಚಿವರ ಜತೆ ಬೆಂಗಳೂರಿನಲ್ಲಿ ಚರ್ಚೆ ನಡೆಸಲಾಗುವುದು. ಆದರೆ ಸಭೆಯ ದಿನಾಂಕ ಇನ್ನೂ ನಿಗದಿ ಆಗಿಲ್ಲ ಎಂದರು. ಸಭೆಯಲ್ಲಿ ಪರಸ್ಪರ ಚರ್ಚಿಸಿದ ಬಳಿಕವೇ ನೀರು ವಿನಿಮಯ ಕುರಿತು ಸರ್ಕಾರದ ತೀರ್ಮಾನ ಪ್ರಕಟಿಸಲಿದೆ ಎಂದು ಸಚಿವ ಜಾರಕಿಹೊಳಿ ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ರೈತರ ಹಿತರಕ್ಷಣೆ ಮತ್ತು ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡುತ್ತಿದ್ದಾರೆ. ಅವರ ಆಶಯದ ಪ್ರಕಾರವೇ ಕೆಲಸ ಮಾಡಲಾಗುತ್ತಿದೆ. ರಾಜ್ಯದ ಎಲ್ಲ ಜಲಾಶಯಗಳಿಗೆ ಭೇಟಿ ನೀಡಿ ಅಧಿಕಾರಿಗಳ ಜತೆ ಚರ್ಚೆ ನಡೆಸಲಾಗುತ್ತಿದ್ದು, ಮುಂದಿನವಾರ ಮೈಸೂರು ಭಾಗದಲ್ಲಿ ಭೇಟಿ ನೀಡಲಿದ್ದೇನೆ.ಬೆಳಗಾವಿ ಜಿಲ್ಲೆಯ ಎಲ್ಲ 18 ವಿಧಾನಸಭಾ ಕ್ಷೇತ್ರದಲ್ಲಿ ನೀರಾವರಿ ಯೋಜನೆಗಳ ಕಾಮಗಾರಿಗಳನ್ನು ಚುರುಕುಗೊಳಿಸಲಾಗುತ್ತದೆ ಎಂದು ತಿಳಿಸಿದರು.

ರಸ್ತೆ ಮೂಲಕ ದೆಹಲಿಗೆ ಪ್ರಯಾಣ-ಚಿಂತನೆ:

ಮಹದಾಯಿ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಜಲ ಆಯೋಗದ ಜತೆ ಚರ್ಚಿಸಿ, ಮನವರಿಕೆ ಮಾಡಬೇಕಿದೆ. ಆದರೆ ಕೋವಿಡ್ ಹಿನ್ನೆಲೆಯಲ್ಲಿ ವಿಮಾನ ಸಂಚಾರ ಸ್ಥಗಿತಗೊಳಿಸಿರುವುದರಿಂದ ರಸ್ತೆ ಮಾರ್ಗದ ಮೂಲಕವೇ ದೆಹಲಿಗೆ ತೆರಳುವ ಬಗ್ಗೆ ಚಿಂತನೆ ಮಾಡಲಾಗುತ್ತಿದೆ ಎಂದು ಸಚಿವ ರಮೇಶ್ ಜಾರಕಿಹೊಳಿ ತಿಳಿಸಿದರು.

ವೈದ್ಯರ ಸಲಹೆ ಮತ್ತು ಸರ್ಕಾರದ ಮಾರ್ಗಸೂಚಿಯನ್ನು ಪಾಲಿಸಿದರೆ ಕೊರೊನಾ ತಡೆಗಟ್ಟುವುದು ದೊಡ್ಡ ಸವಾಲು ಅಲ್ಲ. ಆದ್ದರಿಂದ ಎಲ್ಲರೂ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಮನವಿ ಮಾಡಿಕೊಂಡರು. ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಜಗದೀಶ್ ಶೆಟ್ಟರ್ ಅವರು, ಜಿಲ್ಲೆಯ ಜನರ ಸಮಸ್ಯೆಗಳಿಗೆ ಅತ್ಯುತ್ತಮವಾಗಿ ಸ್ಪಂದಿಸುತ್ತಿದ್ದಾರೆ ಎಂದು ಸಚಿವ ಜಾರಕಿಹೊಳಿ ಹೇಳಿದರು. ರಾಯಬಾಗ ಶಾಸಕ ದುರ್ಯೋಧನ ಐಹೊಳೆ ಉಪಸ್ಥಿತರಿದ್ದರು.



## ಸದ್ಯಕ್ಕೆ ಬಸ್ ಪ್ರಯಾಣ ದರ ಹೆಚ್ಚಳ ಮಾಡಲ್ಲ : ಡಿಸಿಎಂ ಸವದಿ

ಬೆಂಗಳೂರು, ಮೇ 18- ಕೆಎಸ್‌ಆರ್ಟಿಸಿ, ಬಿಎಂಟಿಸಿ, ಎನ್‌ಇಕೆಎಸ್‌ಆರ್ಟಿ ಹಾಗೂ ಎನ್‌ಡಬ್ಲು ಕೆಎಸ್‌ಆರ್ಟಿಸಿ ಸೇರಿದಂತೆ ನಾಲ್ಕು ನಗಮಗಳು ನಷ್ಟದಲ್ಲಿದ್ದರೂ ಸದ್ಯದ ಪರಿಸ್ಥಿ ತಿಯಲ್ಲಿ ಬಸ್ ಪ್ರಯಾಣವನ್ನು ಹೆಚ್ಚಳ ಮಾಡುವುದಿಲ್ಲ ಎಂದು ಸಾರಿಗೆ ಸಚಿವ ಲಕ್ಷ್ಮಣ್ ಸವದಿ ಸ್ಪಷ್ಟಪಡಿಸಿ ದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರಿಗೆ ನಗಮಗಳು ನಷ್ಟದ ಲ್ಲಿವೆ. ದರ ಹೆಚ್ಚಳ ಮಾಡುವುದು ಅನಿವಾರ್ಯ ವಾದರೂ ಇಂದಿನ ಪರಿಸ್ಥಿತಿ ಯಲ್ಲಿ ದರ ಏರಿಕೆ ಮಾಡು ವುದಿಲ್ಲ ಎಂದು ಹೇಳಿ ದರು.ಲಾಕ್‌ಡೌನ್ ಜಾರಿಯಾಗಿ ಸರಿಸುಮಾರು ಒಂದೂವರೆ ತಿಂಗಳಾಗಿವೆ. ಸದ್ಯಕ್ಕೆ ಯಾವುದೇ ರೀತಿಯ ಆದಾಯ ಇಲ್ಲದ ಕಾರಣ ನಷ್ಟ ಸರಿದೂಗಿಸುವುದು ಸುಲಭದ ಮಾತಲ್ಲ. ಸರ್ಕಾರ ನಷ್ಟದ ಪ್ರಮಾಣವನ್ನು ಭರಿಸಲಿದೆ ಎಂದು ತಿಳಿಸಿದರು.ಮಹಾರಾಷ್ಟ್ರ, ಒಡಿಶಾ ಸೇರಿದಂತೆ ಬೇರೆ ಬೇರೆ ರಾಜ್ಯಗಳಲ್ಲಿ ಪ್ರಯಾ ಣ ದರವನ್ನು ಏರಿಕೆ ಮಾಡ ಲಾಗಿದೆ. ನಮ್ಮ ಸರ್ಕಾರ ನಷ್ಟದಲ್ಲಿ ದ್ದರೂ ಪ್ರಯಾಣಿಕರ ಹಿತದೃಷ್ಟಿಯನ್ನು ಗಮನದಲ್ಲಿ ಟ್ಟುಕೊಂಡು ದರ ಏರಿಕೆ ಮಾಡ ಬಾರದೆಂಬ ತೀರ್ಮಾನಕ್ಕೆ ಬಂದಿದ್ದೇವೆ ಎಂದರು.ನಾಳೆ ಪ್ರಾಯೋಗಿಕವಾಗಿ ನಿರ್ಧಿಷ್ಟ ಪ್ರಮಾಣದ ಬಸ್‌ಗಳು ಸಂಚರಿ ಸಲಿವೆ. ಜನರ ಪ್ರತಿಕ್ರಿಯೆ ನೋ ಡಿಕೊಂಡು ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಹೆಚ್ಚಿನ ಬಸ್ ಸೌಲಭ್ಯ ಹೆಚ್ಚಿಸುವುದಾಗಿ ಹೇಳಿದರು.ಬಸ್, ಟ್ಯಾಕ್ಸಿ, ವೋಲಾ, ಊಬರ್ ಮತ್ತಿತ'ರ ವಾಹನಗಳಲ್ಲಿ ಪ್ರತಿಯೊಬ್ಬರು ಕಡ್ಡಾಯವಾಗಿ ಮಾಸ್ಕ್ ಧರಿಸು ವುದು, ಸ್ಯಾನಟೈಸರ್ ಬಳಕೆ, ಸಾಮಾಜಿಕ ಅಂತರ ಕಾಯ್ದುಕೊ ಳ್ಳಬೇಕು, ಒಂದು ವೇಳೆ ನಯಮ ಗಳನ್ನು ಉಲ್ಲಂಘಿಸಿದರೆ ಅಂಥ ವರ ಮೇಲೆ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟರು.ಈಗಾಗಲೇ ಇಲಾಖೆ ಅಧಿಕಾರಿಗಳು ಪ್ರಯಾ ಣಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಎಲ್ಲ ರೀತಿಯ ಕ್ರಮಗಳನ್ನು ಕೈಗೊಂಡಿದ್ದಾರೆ. ಪ್ರಯಾಣಿಕರು ಕೂಡ ಈ ಹಿಂದೆ ನೀಡಿದ ಸಹಕಾರದಂತೆ ಮುಂದೆಯೂ ನೀಡಬೇಕು ಎಂದು ಮನವಿ ಮಾಡಿದರು. ಕಂಟೋನ್ಮೆಂಟ್ ಮತ್ತು ರೆಡ್‌ಜೋನ್‌ಗಳಲ್ಲಿ ಯಥಾ ಸ್ಥಿತಿ ಮುಂದುವರೆಯಲಿದೆ. ಇಲ್ಲಿ ಪರಿಸ್ಥಿತಿಗೆ ಅನುಗುಣವಾಗಿ ನಿರ್ಧಾರವನ್ನು ತೆಗೆದುಕೊಳ್ಳಲಿದ್ದೇವೆ ಎಂದು ಹೇಳಿದರು.



ಕೊಪ್ಪಳ: ಕರ್ನಾಟಕ ಸರ್ಕಾದ ಕೃಷಿ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಸಿ. ಪಾಟೀಲ್ ಅವರು ಇಂದು (ಮೇ.18) ಜಿಲ್ಲಾ ಉಸ್ತುವಾರಿ ಸಚಿವರ ಕಛೇರಿಯ ಪೂಜಾ ಕಾರ್ಯಕ್ರಮ ನೆರವೇರಿಸಿದರು. ಮತ್ತು ಜಿಲ್ಲಾ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಸಣ್ಣ ಯಂತ್ರಚಾಲಿತ ಎಣ್ಣೆಗಾಣ ಹಾಗೂ ಬಿತ್ತನೆ ಬೀಜ ಚೀಲಗಳನ್ನು ವಿತರಿಸಿದರು. ನಂತರ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಜಿ.ಪಂ. ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

## ರೈಲು ಸೇವೆ ಆರಂಭಿಸಲ್ಲ:ಸುರೇಶ ಅಂಗಡಿ

ಬೆಳಗಾವಿ :ಲಾಕ್‌ಡೌನ್ 4.0ದಲ್ಲಿ ಬಸ್ ಸೇವೆ ಆರಂಭವಾದರೂ ರೈಲು ಸೇವೆ ಮಾತ್ರ ನಾಳೆಯಿಂದ ಆರಂಭಿಸುವುದಿಲ್ಲವೆಂದು ಕೇಂದ್ರ ರೇಲ್ವೆ ರಾಜ್ಯ ಖಾತೆ ಸಚಿವ ಸುರೇಶ ಅಂಗಡಿ ತಿಳಿಸಿದರು.ಬೆಳಗಾವಿಯಲ್ಲಿ ಮಾಧ್ಯಮಗಾರೊಂದಿಗೆ ಮಾತನಾಡಿದ ಕೇಂದ್ರ ರೇಲ್ವೆ ರಾಜ್ಯ ಖಾತೆ ಸಚಿವ ಸುರೇಶ ಅಂಗಡಿ ಅವರು ಲಾಕ್‌ಡೌನ್ 4.0ದಲ್ಲಿ ಬಸ್ ಸೇವೆ ಆರಂಭಿಸಲುಸರ್ಕಾರ ನಿರ್ದೇಶನವನ್ನ ನೀಡಿದೆ.



ಆದರೇ ಕೇಂದ್ರ ರೇಲ್ವೆ ಮಂಡಳದಿಂದ ರೈಲು ಸೇವೆ ಆರಂಭಿಸಲೂ ಂ:´ಾ ವ್ರ ದ್ೀ ನಿರ್ದೇಶನವನ್ನ ನೀಡಿಲ್ಲವೆಂದರು. ಸಂಬಂಧಿಸಿದ ರಾಜ್ಯ ಸರ್ಕಾರದೊಂದಿದೆ ಚರ್ಚಿಸಿ, ಸ್ವೇಶಲ್ ಟ್ರೇನ್, ಶ್ರಮೀಕ್ ಸ್ವೇಶಲ್ ಟ್ರೇನ್ ಆರಂಭಿಸಲಾಗುವುದು. ಬುಕ್ಕಿಂಗ್, ಸೋಶಲ್ ಡಿಸ್ಟನ್ಸ್ ಬಗ್ಗೆ ಚರ್ಚಿಸಿ ಕ್ರಮಕೈಗೊಳ್ಳಲಾಗುವುದು ಎಂದರು.

### ಗಟ್ಟಿ ಬಸವಣ್ಣ ಕುಡಿಯುವ ನೀರು ಮತ್ತು ಜಲವಿದ್ಯುತ್ ಯೋಜನೆ ಅನುಷ್ಠಾನ ಕುರಿತು ಚರ್ಚೆ

## ವರ್ಷದಲ್ಲಿ ಕಾಮಗಾರಿ ಪೂರ್ಣ: ಸಚಿವ ರಮೇಶ್ ಜಾರಕಿಹೊಳಿ ಆಶಯ



ಬೆಳಗಾವಿ, ಮೇ.18 : ಗೋಕಾಕ ನಗರ ಮತ್ತು ಸುತ್ತಮುತ್ತಲಿನ ಹಳ್ಳಿಗಳಿಗೆ ಶಾಶ್ವತ ಕುಡಿಯುವ ನೀರು ಒದಗಿಸಲು ಗೋಕಾಕ ನಗರದ ಬಳಿ ಗಟ್ಟಿ ಬಸವಣ್ಣ ಜಲಾಶಯ ನಿರ್ಮಾಣ ಮಾಡಬೇಕು ಎಂಬುದು ನಮ್ಮ ಆಶಯವಾಗಿದೆ. ಆದಷ್ಟು ಬೇಗನೇ ಕಾಮಗಾರಿ ಪೂರ್ಣಗೊಳಿಸಲು ಅಗತ್ಯ ಅನುದಾನ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾದಿಂದ ಎಲ್ಲ ರೀತಿಯ ಅನುಮತಿ ಮತ್ತು ನೆರವು ನೀಡಲಾಗುವುದು ಎಂದು ಜಲಸಂಪನ್ಮೂಲ ಇಲಾಖೆಯ ಸಚಿವ ರಮೇಶ್ ಜಾರಕಿಹೊಳಿ ಹೇಳಿದರು.

ಕರ್ನಾಟಕ ನೀರಾವರಿ ನಿಗಮದ ಉತ್ತರ ವಲಯದ ಮುಖ್ಯ ಎಂಜಿನಿಯರ್ ಅವರ ಕಚೇರಿಯಲ್ಲಿ ಸೋಮವಾರ (ಮೇ 18) ನಡೆದ ಗಟ್ಟಿ ಬಸವಣ್ಣ ಯೋಜನೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಸಾಧ್ಯವಾದರೆ ಮುಂದಿನ ವರ್ಷದ ಜೂನ್ ವೇಳೆಗೆ ಗಟ್ಟಿ ಬಸವಣ್ಣ ಜಲಾಶಯ ಪೂರ್ಣಗೊಳ್ಳಬೇಕು. ಇದಕ್ಕೆ ಅಗತ್ಯವಿರುವ ಅರಣ್ಯ, ಪರಿಸರ ಮತ್ತಿತರ ಇಲಾಖೆಗಳಿಂದ ಅಗತ್ಯ ಅನುಮತಿಯನ್ನು ತ್ವರಿತವಾಗಿ ಪಡೆದುಕೊಳ್ಳಬೇಕು ಎಂದು ಸಚಿವ ರಮೇಶ್ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.ಯೋಜನೆ ಅನುಷ್ಠಾನೆ ಸುಗಮ ಮತ್ತು ತ್ವರಿತವಾಗಿ ಕೈಗೊಳ್ಳಲು ಅರಣ್ಯ, ನೀರಾವರಿ, ಕಂದಾಯ, ಪರಿಸರ ಇಲಾಖೆಗೆ ಸಂಬಂಧಿಸಿದಂತೆ

(2ನೇ ಪುಟಕ್ಕೆ)

## ಜೂನ್ 25ರಿಂದ ಜುಲೈ 4 ರವರೆಗೆ ಎಸ್ ಎಸ್ ಎಲ್ ಸಿ ಪರೀಕ್ಷೆ , ಜೂನ್ 18ರಂದು ಪಿಯುಸಿ ಇಂಗ್ಲೀಷ್ ಪರೀಕ್ಷೆ

ಬೆಂಗಳೂರು : ಎಸ್ ಎಸ್ ಎಲ್ ಸಿ ಪರೀಕ್ಷೆಯನ್ನು ಜೂನ್ 25ರಿಂದ ಜುಲೈ 4 ರವರೆಗೆ ಹಾಗೂ ದ್ವಿತೀಯ ಪಿಯುಸಿ ಇಂಗ್ಲೀಷ್ ಪರೀಕ್ಷೆಯನ್ನು ಜೂನ್ 18ರಂದು ನಡೆಸಲು ನಿರ್ಧರಿಸಲಾಗಿದೆ ಎಂದು ಶಿಕ್ಷಣ ಸಚಿವ ಸುರೇಶ್ ಕುಮಾರ್ ತಿಳಿಸಿದ್ದಾರೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಸುರೇಶ್ ಕುಮಾರ್, ಎಸ್ ಎಸ್ ಎಲ್ ಸಿಯ ಇಂಗ್ಲೀಷ್, ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನ ಪರೀಕ್ಷೆಗಳಿಗೆ ಒಂದೊಂದು ದಿನದ ಅಂತರವಿರಲಿದೆ. ಒಟ್ಟಾರೆ ಎಲ್ಲಾ ಪರೀಕ್ಷೆಗಳು 10 ದಿನದಲ್ಲಿ ಮುಗಿಯಲಿದೆ ಎಂದರು.ಎಸ್ ಎಸ್ ಎಲ್ ಸಿ ಪರೀಕ್ಷೆ ಬದಲಾದ ಪರಿಸ್ಥಿತಿಯಲ್ಲಿ ಹೆಚ್ಚುವರಿ ಕೊಠಡಿ ಬಳಸುತ್ತೇವೆ. 2879 ಪರೀಕ್ಷಾ ಕೇಂದ್ರಗಳಲ್ಲಿ 43720 ಕೊಠಡಿ ಬಳಸುತ್ತಿದ್ದೇವೆ.ಆರೋಗ್ಯ ಇಲಾಖೆಯ ಅಧಿಕಾರಿಗಳ ಸಲಹೆ ಪಡೆದು ಪ್ರತಿ ಸಭಾಂಗಣದಲ್ಲಿ ವಿದ್ಯಾರ್ಥಿಗಳ ನಡುವೆ ಅಂತರ ಕಾಯ್ದುಕೊಳ್ಳುವ ವ್ಯವಸ್ಥೆ ಮಾಡುತ್ತೇವೆ. ಪ್ರತಿ ವಿದ್ಯಾರ್ಥಿಗೆ ಮಾಸ್ಕ್ ಕಡ್ಡಾಯ ಮಾಡುತ್ತಿದ್ದೇವೆ. ಇದಕ್ಕಾಗಿ ಭಾರತ್ ಸ್ಕೌಟ್ ಮತ್ತು ಗೈಡ್ಸ್‌ನಂದ ಎಸ್ ಎಸ್ ಎಲ್ ಸಿ ಮಕ್ಕಳಿಗೆ ಮಾಸ್ಕ್ ನೀಡಲಿದ್ದಾರೆ. ಶಿವನ ಹಳ್ಳಿ ರಾಮಕೃಷ್ಣ ಮಿಷನ್ ನಂದ 2 ಲಕ್ಷ ಮಾಸ್ಕ್ ಬೆಂಗಳೂರು ದಕ್ಷಿಣ, ರಾಮನಗರಕ್ಕೆ ನೀಡಲಿದ್ದಾರೆ. ಪರೀಕ್ಷಾ ಕೇಂದ್ರಕ್ಕೆ ಬಂದ ವಿದ್ಯಾರ್ಥಿಗಳಿಗೆ ಆರೋಗ್ಯ ಸಮಸ್ಯೆ ಇದ್ದರೆ ಬೇರೆ ಕಡೆ ಪರೀಕ್ಷೆ ಬರೆಯಲು ಅವಕಾಶ ಮಾಡಲಾಗುತ್ತದೆ. ಪರೀಕ್ಷೆ ಆರಂಭಕ್ಕೂ ಮೊದಲು ಎಲ್ಲಾ ಕೊಠಡಿಗಳನ್ನು ಸ್ಯಾನಟೈಸ್ ಮಾಡಲಾಗುವುದು.

## ಪ್ರವಾಹದಿಂದ ಹಾನಿಗೊಳಗಾದ ಪುನರ್‌ನಿರ್ಮಾಣ-ಚಾಲ್ತಿಯಲ್ಲಿರುವ ಕಾಮಗಾರಿಗಳನ್ನು ಮುಂದುವರಿಸಿ: ಡಿಸಿಎಂ ಗೋವಿಂದ ಕಾರಜೋಳ

ವಿಜಯಪುರ ಮೇ.18: ಪ್ರವಾಹದಿಂದ ಹಾನಿಗೊಳಗಾದ ಪುನರ್‌ನಿರ್ಮಾಣ ಕಾಮಗಾರಿಗಳು ಸೇರಿದಂತೆ ಚಾಲ್ತಿಯಲ್ಲಿರುವ ಕಾಮಗಾರಿಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸಲು ಕ್ರಮಕೈಗೊಳ್ಳುವಂತೆ ರಾಜ್ಯದ ಉಪಮುಖ್ಯಮಂತ್ರಿಗಳು ಮತ್ತು ಲೋಕೊಪಯೋಗಿ ಹಾಗೂ ಸಮಾಜಕಲ್ಯಾಣ ಸಚಿವರಾದ ಶ್ರೀ ಗೋವಿಂದ ಕಾರಜೋಳ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ನೂತನ ಪ್ರವಾಸಿ ಮಂದಿರದಲ್ಲಿಂದು ಲೋಕೊಪಯೋಗಿ ಇಲಾಖೆ, ಸಮಾಜಕಲ್ಯಾಣ ಹಾಗೂ ಇತರೆ ಇಲಾಖೆಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು ಜಿಲ್ಲೆಯಲ್ಲಿ ನೆರೆಹಾವಳಿ ಸಂದರ್ಭದಲ್ಲಿ ಆಗಿರುವ ಹಾನಿಗೆ ಸಂಬಂಧಿಸಿದಂತೆ ಪರಿಹಾರ ಕಾಮಗಾರಿಗಳು, ಚಾಲ್ತಿಯಲ್ಲಿರುವ ಕಾಮಗಾರಿಗಳು ಮತ್ತು ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾರ್ಯಗಳಿಗೆ ವಿಶೇಷ ಆದ್ಯತೆ ನೀಡಿ ಗುಣಮಟ್ಟದ ಕಾಮಗಾರಿಗಳನ್ನು ಆದ್ಯತೆ ಮೇಲೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಅವರು ಸೂಚನೆ ನೀಡಿದ್ದಾರೆ.



ಅದರಂತೆ ಜಿಲ್ಲೆಯ 8 ವಿಧಾನಸಭಾವಾರು ಕಾಮಗಾರಿಗಳಿಗೆ ವಿಶೇಷ ಒತ್ತು ನೀಡಬೇಕು. ನೂತನ ಕಾಮಗಾರಿಗಳ ಟೆಂಡರ್‌ಗೆ ಸಂಬಂಧಪಟ್ಟಂತೆ ಹಣಕಾಸು ಇಲಾಖೆಯ ಅನುಮತಿಯಿಂದ ಕ್ರಮಕೈಗೊಳ್ಳುವಂತೆ ತಿಳಿಸಿದ ಅವರು ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ವಸತಿ ಶಾಲೆ, ವಸತಿ ನಿಲಯಗಳ ಕಟ್ಟಡ ಕಾಮಗಾರಿಗಳನ್ನು ಮಾತ್ರ ಕೈಗೊಳ್ಳುವಂತೆ ತಿಳಿಸಿರುವ ಅವರು ಕೋವಿಡ್-19 ಲಾಕ್‌ಡೌನ್ ಜಾರಿ ಮತ್ತು ಸಂಕಷ್ಟ ಪರಿಸ್ಥಿತಿ ಇರುವ ಹಿನ್ನಲೆಯಲ್ಲಿ ರಸ್ತೆ ಮತ್ತು ಚರಂಡಿ ಕೆಲಸಗಳನ್ನು ಸಧ್ಯಕ್ಕೆ ಕೈಗೆತ್ತಿಕೊಳ್ಳದಂತೆ ಅವರು ಸೂಚನೆ ನೀಡಿದರು.ವಿಜಯಪುರ ಮತ್ತು ಹುಬ್ಬಳ್ಳಿ ಹೆದ್ದಾರಿ ನಿರ್ಮಿಸಲಾಗಿದ್ದು, ಇದರಡಿ ಶಿಲ್ಕು ಉಳಿದಿರುವ 40 ಕೋಟಿ ರೂ. ಪುನರ್‌ಬಳಕೆಗೆ ಸಂಬಂಧಪಟ್ಟಂತೆ ಈಗಾಗಲೇ ಕಳುಹಿಸಲಾಗಿರುವ ಪ್ರಸ್ಥಾವನೆ ಮಂಜೂರಾತಿಗೆ ಸೂಕ್ತಕ್ರಮ ಕೈಗೊಳ್ಳಲಾಗುವುದು. ಅದರಂತೆ ವಿಜಯಪುರ-ಕಾರಜೋಳ ಮಧ್ಯದ 21 ಕಿ.ಮಿ ರಸ್ತೆ ಕಾಮಗಾರಿ ಪ್ರಗತಿಯಲ್ಲಿದ್ದು, ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕಹೊಂದಲು ಹೆಚ್ಚುವರಿ ರಸ್ತೆ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಅನುದಾನ ಬೇಡಿಕೆ, ಪರಿಷ್ಕೃತ ವರದಿ ಸಲ್ಲಿಸುವಂತೆ ಲೋಕೋಪಯೋಗಿ ಇಲಾಖೆ ಸಹಾಯಕ ಅಭಿಯಂತರರಿಗೆ ಸೂಚಿಸಿದರು.ಅದರಂತೆ ವಿಜಯಪುರ ನಗರದ ಇಟಗಿ ಪೆಟ್ರೋಲ್ ಪಂಪ್ ದಿಂದ ಗೋದಾವರಿ ಹೋಟೆಲ್‌ವರೆಗೆ ನಿರ್ಮಿಸಬೇಕಾದ ಹೆದ್ದಾರಿ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ಪ್ರಸ್ಥಾವನೆಗೆ ಅನುಮೋದನೆ ಪಡೆದು ಕಾಮಗಾರಿ ಆರಂಭಕ್ಕೆ ವಿಶೇಷ ಗಮನವನ್ನು ನೀಡುವಂತೆ ತಿಳಿಸಿದ ಅವರು ವಿಜಯಪುರ ಮತ್ತು ಬಾಗಲಕೋಟ ಜಿಲ್ಲೆಗಳ ವ್ಯಾಪ್ತಿಯಲ್ಲಿ ರಸ್ತೆ ಸುಧಾರಣೆಗೆ ವಿಶೇಷ ಒತ್ತನ್ನು ನೀಡುತ್ತಿದ್ದು, ಕೋವಿಡ್-19 ಸಂಕಷ್ಟ ಪರಿಸ್ಥಿಯಿಂ ದಾಗಿ ಕಾಮಗಾರಿಗಳಿಗೆ ಹಿನ್ನಡೆಯಾಗುತ್ತಿದ್ದು, ಕೋವಿಡ್-19 ಪರಿಸ್ಥಿತಿ ಸುಧಾರಣೆ ಗೊಂಡ ನಂತರ ಆದ್ಯತೆ ಮೇಲೆ ಈ ಕಾಮಗಾರಿಗಳಿಗೆ ಗಮನ ನೀಡಲಾಗುವುದು ಎಂದು ಅವರು ತಿಳಿಸಿದರು.

(2ನೇ ಪುಟಕ್ಕೆ)